# 30ಕ್ಕೆ ಪಾಲಿಕೆ ಸ್ಥಾಯಿ ಸಮಿತಿ ಚುನಾವಣೆ

20-12-19

ಸಂ.ಕ. ಸಮಾಚಾರ

ಬೆಂಗಳೂರು: ಎರಡು ಬಾರಿ ಮುಂದೂಡಿಕೆ ಆಗಿದ್ದ ಬಿಬಿಎಂಪಿ 12 ಸ್ಥಾಯಿ ಸಮಿತಿಗಳಿಗೆ ಡಿಸೆಂಬರ್ 30ರಂದು ಚುನಾವಣೆ ನಡೆಯಲಿದೆ.

ಈ ಕುರಿತು ಪ್ರಾದೇಶಿಕ ಆಯುಕ್ತ ಹರ್ಷ ಗುಪ್ತ ಅಧಿಸೂಚನೆ ಹೊರಡಿಸಿದ್ದು, 12 ಸ್ಥಾಯಿ ಸಮಿತಿಗಳ ಸದಸ್ಯ ಸ್ಥಾನಕ್ಕೆ ಡಿ.30ರ ಸೋಮವಾರ ಬೆಳಗ್ಗೆ 8.30ರಿಂದ 9.30ರ ವರೆಗೆ ನಾಮಪತ್ರ ಸ್ವೀಕರಿಸಲಾಗುವುದು. ನಂತರ ವೇಳಾಪಟ್ಟಿಯಂತೆ 11.30ಕ್ಕೆ ಸ್ಥಾಯಿ ಸಮಿತಿ ಸದಸ್ಯರ ಆಯ್ಕೆ ಚುನಾವಣೆ ಬಿಬಿಎಂಪಿಯ ಕೇಂದ್ರ ಕಚೇರಿಯ ಕೆಂಪೇಗೌಡ ಪೌರಸಭಾಂಗಣದಲ್ಲಿ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

## ಆಡಳಿತ ಪಕ್ಷದ ಸಂಖ್ಯಾಬಲ ಏರಿಕೆ

ಉಪಚುನಾವಣೆಯಲ್ಲಿ ನಗರದ ನಾಲ್ಕು ವಿಧಾನಸಭಾ ಕ್ಷೇತ್ರದ ಮೂರು ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಗಳು ಜಯ ಗಳಿಸಿದ್ದಾರೆ. ಜತೆಗೆ ರಾಜ್ಯಸಭಾ ಸದಸ್ಯ ಕೆ.ಸಿ.ರಾಮಮೂರ್ತಿ ಕಾಂಗ್ರೆಸ್ ತೊರೆದು ಬಿಜೆಪಿಯಿಂದ ರಾಜ್ಯಸಭೆಗೆ ಮರು ಆಯ್ಕೆಗೊಂಡಿರುವುದಕ್ಕೆ ಬಿಜೆಪಿ ಸಂಖ್ಯಾ ಬಲ 125ರಿಂದ 129ಕ್ಕೆ ಏರಿಕೆಯಾಗಿದೆ. ಇನ್ನು ಶಿವಾಜಿನಗರ ಕ್ಷೇತ್ರದಿಂದ ಜಯಗಳಿಸಿ ರಿಜ್ವಾನ್ ಅರ್ಷದ್ ಜಯಗಳಿಸಿದ್ದಾರೆ. ಆದರೆ, ಅವರು ಈ ಹಿಂದೆ ವಿಧಾನಪರಿಷತ್ ಸದಸ್ಯರಾಗಿದ್ದರಿಂದ ಕಾಂಗ್ರೆಸ್ ಪಕ್ಷದ ಸಂಖ್ಯಾಬಲದಲ್ಲಿ ಏರಿಕೆಯಾಗಿಲ್ಲ. ಕೆ.ಸಿ.ರಾಮಮೂರ್ತಿ ಕಾಂಗ್ರೆಸ್ ಬಿಟ್ಟು ಬಿಜೆಪಿ ಸೇರಿದ್ದರಿಂದ ಸಂಖ್ಯಾ ಬಲ 104ರಿಂದ 103ಕ್ಕೆ ಕುಸಿದಿದೆ. ಈಗ ಒಟ್ಟಾರೆ ಬಿಬಿಎಂಪಿ ಮತದಾರರ ಸಂಖ್ಯೆ 260ಕ್ಕೆ ಏರಿಕೆಯಾಗಿದೆ. ಅ.1ರ ಮೇಯರ್ ಚುನಾವಣೆ ಸಂದರ್ಭದಲ್ಲಿ ಅನರ್ಹಗೊಂಡಿದ್ದ ನಗರ ಐದು ವಿಧಾನಸಭಾ ಕ್ಷೇತ್ರ ಶಾಸಕರನ್ನು ಮತದಾರ ಪಟ್ಟಿಯಿಂದ ಕೈಬಿಡಲಾಗಿತ್ತು.

### ಬಿಜೆಪಿ ಸದಸ್ಯರಿಗೆ ಪ್ರಾಶಸ್ತ್ಯ

ಸ್ಥಾಯಿ ಸಮಿತಿ ಅಧ್ಯಕ್ಷ ಸ್ಥಾನ ಹಂಚಿಕೆ ಬಗ್ಗೆ ಇನ್ನು ಯಾವುದೇ ತೀರ್ಮಾನ ತೆಗೆದುಕೊಂಡಿಲ್ಲ. ಬಿಜೆಪಿಯಿಂದ ಆಯ್ಕೆಗೊಂಡ ಸದಸ್ಯರಿಗೆ ಮೊದಲ ಪ್ರಾಶಸ್ತ್ಯ ನೀಡಲಾಗುವುದು. ಇನ್ನು ಪಕ್ಷೇತರ ಸದಸ್ಯರು ಬೇಷರತ್ ಬೆಂಬಲ ನೀಡಿದ್ದಾರೆ. ಯಾರಿಗೆ ಯಾವ ಸ್ಥಾನಮಾನ ಗೌರವ ನೀಡಬೇಕು ಎಂಬುದರ ಬಗ್ಗೆ ಪಕ್ಷದ ವೇದಿಕೆಯಲ್ಲಿ ತೀರ್ಮಾನಿಸಲಾಗುವುದು.

– ಮುನೀಂದ್ರ ಕುಮಾರ್,
ಆಡಳಿತ ಪಕ್ಷದ ನಾಯಕ

### ಉಚ್ಚಾಟಿತ ಸದಸ್ಯರಿಗೆ ಮನ್ನಣೆ ಬೇಡ

ಕಾಂಗ್ರೆಸ್‌ನಿಂದ ಉಚ್ಚಾಟನೆ ಮಾಡಿದ 12 ಬಿಬಿಎಂಪಿ ಸದಸ್ಯರಿಗೆ ಯಾವುದೇ ಸ್ಥಾಯಿ ಸಮಿತಿ ಸದಸ್ಯತ್ವ ನೀಡಬಾರದು. ಹಾಗಿದ್ದರೆ ಮಾತ್ರ ಹೊಂದಾಣಿಕೆಯಿಂದ ಸ್ಥಾಯಿ ಸಮಿತಿ ಸದಸ್ಯರನ್ನು ಅವಿರೋಧವಾಗಿ ಆಯ್ಕೆಗೆ ಅವಕಾಶ ನೀಡಲಾಗುವುದು.

– ಅಬ್ದುಲ್ ವಾಜೀದ್,
ವಿರೋಧ ಪಕ್ಷದ ನಾಯಕ